ಇ) ಖಾಲಿ ಇರುವ ಹುದ್ದೆಗಳಲ್ಲಿ ಹೆಚ್ಚಿನ ವ್ಯವಸ್ಥೆಯ ಮೇಲೆ ಅಧಿಕಾರಿಗಳು ನೌಕರರು ಕಾರ್ಯ ನಿರ್ವಹಿಸುತ್ತಿರುವುದರಿಂದ ಇಲಾಖಾ ಕಾರ್ಯಕ್ರಮಗಳ ಪ್ರಗತಿ ಕುಂಠಿತವಾಗಿರುವುದಿಲ್ಲ.

ಹಾಸನ ಜಿಲ್ಲೆಯಲ್ಲಿ "ಹಸಲರು" ಪಂಗಡಕ್ಕೆ ಪ್ರಮಾಣ ಪತ್ರ

1958 - ಹೆಚ್. ಕೆ. ಕುಮಾರಸ್ವಾಮಿ (ಬೇಲೂರು) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಹಾಸನ ಜಿಲ್ಲೆಯಲ್ಲಿ 'ಹಸಲರು' ಎಂಬ ಪರಿಶಿಷ್ಟ ಪಂಗಡದವರು ದಶಕಗಳಿಂದ ದಕ್ಷಿಣ ಕನ್ನಡ ಜಿಲ್ಲೆಯಿಂದ ವಲಸೆ ಬಂದು ವಾಸಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಈ ವರ್ಗದವರಿಗೆ ಜಾತಿ ಪ್ರಮಾಣ ಪತ್ರ ನೀಡದಿರುವುದು ಗಮನಕ್ಕೆ ಬಂದಿದೆಯೇ?*

ಇ) *ಬಂದಿದ್ದಲ್ಲಿ ಜಾತಿ ಪ್ರಮಾಣ ಪತ್ರವನ್ನು ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ?*

ಶ್ರೀ ಕೆ.ಎಂ. ಕೃಷ್ಣಾರೆಡ್ಡಿ (ಸಮಾಜ ಕಲ್ಯಾಣ ಸಚಿವರು) :

ಅ) ಹೌದು.

ಆ) ಇಲ್ಲ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ಅಲ್ಪ ಸಂಖ್ಯಾತರು ನಡೆಸುತ್ತಿರುವ ವಿದ್ಯಾರ್ಥಿ ನಿಲಯಗಳು

1959 - ಶ್ರೀ ಕುಂಬೈ ಸುಂದರರಾವ್ (ಸುರತ್ಕಲ್) : ಮಾನ್ಯ ಹಿಂದುಳಿದ ವರ್ಗಗಳ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯದಲ್ಲಿ ಅಲ್ಪಸಂಖ್ಯಾತರ ವಿವಿಧ ವರ್ಗಗಳು ನಡೆಸುತ್ತಿರುವ ವಿದ್ಯಾರ್ಥಿನಿಲಯಗಳ ಸಂಖ್ಯೆ ಎಷ್ಟು? (ಜಿಲ್ಲಾವಾರು ಮಾಹಿತಿ ಒದಗಿಸುವುದು)*

ಆ) *ಈ ವಿದ್ಯಾರ್ಥಿನಿಲಯಗಳಲ್ಲಿ ಸರ್ಕಾರದವರು ಸಹಾಯಧನ ನೀಡುತ್ತಿರುವ ವಿದ್ಯಾರ್ಥಿನಿಲಯಗಳ ಸಂಖ್ಯೆ ಎಷ್ಟು?*

ಇ) *1996-97 ಮತ್ತು 1997-98ನೇ ಸಾಲಿನಲ್ಲಿ ಇವುಗಳಿಗೆ ನೀಡಿದ ಸಹಾಯಧನದ ವಿವರಗಳೇನು?*

ಶ್ರೀ ಮಾಲೀಕಯ್ಯ ಗುತ್ತೇದಾರ್ (ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು) :

ಅ) ರಾಜ್ಯದಲ್ಲಿ ಅಲ್ಪಸಂಖ್ಯಾತರ ವಿವಿಧ ವರ್ಗಗಳು ನಡೆಸುತ್ತಿರುವ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆಯ ಅನುದಾನಿತ ವಿದ್ಯಾರ್ಥಿ ನಿಲಯಗಳ ಸಂಖ್ಯೆ 39 (ಜಿಲ್ಲಾವಾರು ಮಾಹಿತಿ ಅನುಬಂಧದಲ್ಲಿ ನೀಡಿದೆ).